ಈ ಕೆಳಕಂಡ 5 ಸಕ್ಕರೆ ಕಾರ್ಖಾನೆಗಳು ಈಗಾಗಲೇ ಕೋ ಜನರೇಷನ್ ಘಟಕ ಅಳವಡಿಕೆಯ ಕೆಲಸ ಕೈಗೆತ್ತಿಕೊಂಡಿವೆ

1) ಗೋದಾವರಿ ಶುಗರ್ ಮಿಲ್ಸ್, ಸಮೀರವಾಡಿ
2) ಚಾಮುಂಡೇಶ್ವರಿ ಶುಗರ್ಸ್, ಕೆ.ಎಂ. ದೊಡ್ಡಿ
3) ಮೈಸೂರು ಸಕ್ಕರೆ ಕಾರ್ಖಾನೆ, ಮಂಡ್ಯ
4) ದಾವಣಗೆರೆ ಸಕ್ಕರೆ ಕಾರ್ಖಾನೆ, ಕುಕ್ಕವಾಡ
5) ರೈತರ ಸಹಕಾರಿ ಸಕ್ಕರೆ ಕಾರ್ಖಾನೆ (ನಿ), ರನ್ನನಗರ

ಹಾಲಿ ಕಾರ್ಯ ನಿರ್ವಹಿಸುತ್ತಿರುವ ಬಾಕಿ ಉಳಿದ ಕಾರ್ಖಾನೆಗಳೂ ಸಹ ಲಾಭದಾಯಕವಾಗಿ ನಡೆಯಲು ಕೋ ಜನರೇಷನ್ ಘಟಕ ಅಳವಡಿಸುವುದು ಅನಿವಾರ್ಯವಾಗಿದೆ. ಆದುದರಿಂದ ಹಂತಹಂತವಾಗಿ ಅವುಗಳೂ ಕೂಡ ಈ ಯೋಜನೆಯನ್ನು ಕೈಗೆತ್ತಿಕೊಳ್ಳುವುದರತ್ತ ಯೋಚಿಸುತ್ತಿವೆ.

ಅದೇ ರೀತಿ ಹೊಸದಾಗಿ ಪ್ರಾರಂಭವಾಗಲಿರುವ ಸಹಕಾರಿ ವಲಯದ 10 ಸಕ್ಕರೆ ಕಾರ್ಖಾನೆಗಳಿಗೆ ಕೋ ಜನರೇಷನ್ ಘಟಕ ಅಳವಡಿಸಿಕೊಳ್ಳುವುದನ್ನು ಕಡ್ಡಾಯಗೊಳಿಸಲಾಗಿದೆ. ಖಾಸಗಿ ವಲಯದಲ್ಲಿ ಹೊಸದಾಗಿ ಪ್ರಾರಂಭವಾಗಲಿರುವ ಬಹುತೇಕ ಸಕ್ಕರೆ ಕಾರ್ಖಾನೆಗಳೂ ಕೂಡ ಕೋ ಜನರೇಷನ್ ಅಳವಡಿಸಿಕೊಳ್ಳುತ್ತದೆ.

ಬಸವನ ಬಾಗೇವಾಡಿ ವಿಧಾನ ಸಭಾ ಕ್ಷೇತ್ರದಲ್ಲಿ ಸಿ.ಆರ್.ಎಫ್. ಯೋಜನೆ ರಾಷ್ಟ್ರೀಯ ಹೆದ್ದಾರಿ ಡಾಂಬರೀಕರಣ.

2197(3386) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸಿ.ಆರ್.ಎಫ್. ಯೋಜನೆಯಡಿ ಬಸವನಬಾಗೇವಾಡಿ ಮತಕ್ಷೇತ್ರ ವ್ಯಾಪ್ತಿಯ ಶೇಗುಣಶಿ-ಮಮದಾಪೂರ ಮಮದಾಪೂರ-ಕಂಬಾಗಿ, ರೇವರಗೆಣ್ಣೂರು-ಕಂಬಾಗಿ ಹಾಗೂ ಬಾಗೇವಾಡಿ ತಾಲ್ಲೂಕಿನ ಮಸೂತಿ- ಕೂಡಗಿ ರಾಷ್ಟ್ರೀಯ ಹೆದ್ದಾರಿ ರಸ್ತೆಯನ್ನು ದುರಸ್ತಿಗೊಳಿಸಿ ಡಾಂಬರೀಕರಣ ಮಾಡುವ ವಿಚಾರ ಸರ್ಕಾರದ ಮುಂದಿದೆಯೇ?

ಆ) ಇದ್ದಲ್ಲಿ ಈ ಡಾಂಬರೀಕರಣ ಯೋಜನೆಗಳ ಕಾಮಗಾರಿಗಳನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ) :—

ಅ) ಅಂದಾಜು ಪತ್ರಿಕೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಆ) ಅಂದಾಜು ಪತ್ರಿಕೆಗಳಿಗೆ ಮಂಜೂರಾತಿ ದೊರೆತ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.